# ತುಮಕೂರು ವಿಶ್ವವಿದ್ಯಾನಿಲಯ


ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್.ರಸ್ತೆ, ತುಮಕೂರು-572 103

ದೂರವಾಣಿ : 0816-2254546, 0816-2255596, 0816-2255597 ಫ್ಯಾಕ್ಸ್ : 0816-2270719


ಸಂಖ್ಯೆ: ತು.ವಿ: ಸಾವಿ:2019-20/ 779 ದಿನಾಂಕ: 07.06.2019

## ದರಪಟ್ಟಿ ಆಹ್ವಾನ

ವಿಷಯ: ತುಮಕೂರು ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳು, ವಿವಿಧ ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ಪಿ.ಹೆಚ್.ಡಿ ವಿದ್ಯಾರ್ಥಿಗಳು ಮತ್ತು ಇತರೆ ಸಿಬ್ಬಂದಿಗಳಿಗೆ ಗುರುತಿನ ಚೀಟಿಗಳನ್ನು ಮುದ್ರಿಸಿ ಸರಬರಾಜು ಮಾಡಲು ವಾರ್ಷಿಕ ದರಕರಾರು ಒಪ್ಪಂದಕ್ಕಾಗಿ ದರಪಟ್ಟಿಗಳನ್ನು ಆಹ್ವಾನಿಸುತ್ತಿರುವ ಕುರಿತು.

ಉಲ್ಲೇಖ: ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ: 06.06.2019, ಕಂಡಿಕೆ (18).

* * * *

ತುಮಕೂರು ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳು, ವಿವಿಧ ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ಪಿ.ಹೆಚ್.ಡಿ ವಿದ್ಯಾರ್ಥಿಗಳು ಮತ್ತು ಇತರೆ ಸಿಬ್ಬಂದಿ ವರ್ಗದವರಿಗೆ ಗುರುತಿನ ಚೀಟಿಗಳನ್ನು ಮುದ್ರಿಸಿ ಸರಬರಾಜು ಮಾಡಲು ವಾರ್ಷಿಕ ದರಕರಾರು ಒಪ್ಪಂದಕ್ಕಾಗಿ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಗುರುತಿನ ಚೀಟಿಗಳ ಮಾದರಿ, ವೈಶಿಷ್ಟತೆ ವಿವರಗಳು ಈ ಕೆಳಕಂಡಂತಿವೆ.

| Sl No | Particulars | Specifications | Quantity | Rate to be quoted per ID Card with printing (Incl. of all taxes) |
|---|---|---|---|---|
| 01 | ID Card (For UG, PG & Ph.D Students and Other Staff) | • Material:PVC Plastic<br>• Printing: Digital<br>• Size- 85.6 mm X 54 mm<br>• Thickness: Standard ATM card 0.8<br>• Finishing: Glossy<br>• Print Student admission Reg. No. and Bar code (3.2 X 2 inches)<br>• Card holder with stain tag printed tag | As per demand | |

ಷರತ್ತುಗಳು:

1. ವಿಶ್ವವಿದ್ಯಾನಿಲಯವು ಗುರುತಿನ ಚೀಟಿಗಳನ್ನು ಕಾರ್ಯಾದೇಶದಲ್ಲಿ ನಿಗಧಿಪಡಿಸಿದ ಅವಧಿಯೊಳಗೆ ಮುದ್ರಿಸಿ ಸರಬರಾಜು ಮಾಡುವುದು.
2. ಲಕೋಟೆಯ ಮೇಲೆ "ತುಮಕೂರು ವಿಶ್ವವಿದ್ಯಾನಿಲಯದ ಘಟಕ ಕಾಲೇಜುಗಳು, ವಿವಿಧ ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ಪಿ.ಹೆಚ್.ಡಿ ವಿದ್ಯಾರ್ಥಿಗಳು ಮತ್ತು ಇತರೆ ಸಿಬ್ಬಂದಿಗಳಿಗೆ ಗುರುತಿನ ಚೀಟಿಗಳನ್ನು ಮುದ್ರಿಸಿ ಸರಬರಾಜು ಮಾಡಲು ವಾರ್ಷಿಕ ದರಕರಾರು ಒಪ್ಪಂದಕ್ಕಾಗಿ ದರಪಟ್ಟಿ" ಎಂದು ನಮೂದಿಸಿ ಮುಚ್ಚಿದ ಲಕೋಟೆಯಲ್ಲಿ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸತಕ್ಕದ್ದು.
3. ಸರಬರಾಜು ಸಂಸ್ಥೆಯವರು ತಮ್ಮ ಸಂಸ್ಥೆಯ GST No. ಮತ್ತು PAN No. ದಾಖಲೆಗಳನ್ನು ದರಪಟ್ಟಿಯ ಜೊತೆಗೆ ಕಡ್ಡಾಯವಾಗಿ ಲಗತ್ತಿಸಬೇಕು.
4. ದರಪಟ್ಟಿಯ ಅವಧಿಯು ದರಪಟ್ಟಿಯನ್ನು ತೆರೆದ ದಿನಾಂಕದಿಂದ 365 ದಿನಗಳ ಅವಧಿಯವರೆಗೆ ಚಾಲ್ತಿಯಲ್ಲಿರಬೇಕು.
5. ಸರಬರಾಜು ಮಾಡಲು ಯಾವುದೇ ಮುಂಗಡ ಹಣವನ್ನು ನೀಡಲಾಗುವುದಿಲ್ಲ.
6. ಸರಬರಾಜು ಆದೇಶದಲ್ಲಿ ತಿಳಿಸಿದ ಅವಧಿಯೊಳಗೆ ಅಥವಾ ವಿಸ್ತರಿಸಿದ ಅವಧಿಯೊಳಗೆ ಗುರುತಿನ ಚೀಟಿಗಳನ್ನು ಸರಬರಾಜು ಮಾಡಬೇಕು.
7. ಈ ದರಪಟ್ಟಿಯು ಒಂದು ಲಕ್ಷಕ್ಕೆ ಮಿತಿಗೊಳಪಟ್ಟಿರುತ್ತದೆ.
8. ದರಪಟ್ಟಿಯಲ್ಲಿ ನಮೂದಿಸುವ ದರಗಳು ತೆರಿಗೆ ಮೊತ್ತ ಮತ್ತು ಸಾಗಾಣಿಕೆ ಮೊತ್ತವನ್ನು ಒಳಗೊಂಡಿರಬೇಕು.
9. ದರಪಟ್ಟಿಯನ್ನು ಅಂಗೀಕರಿಸುವಾಗ ಸಂಸ್ಥೆಗಳು ಸಲ್ಲಿಸಿದ ದರಪಟ್ಟಿಯ ಅತೀ ಕಡಿಮೆ ದರವನ್ನು ಪರಿಗಣಿಸಲಾಗುವುದು.
10. ದರಪಟ್ಟಿಗಳ ಆಯ್ಕೆಯ ವಿಷಯದಲ್ಲಿ ತುಮಕೂರು ವಿಶ್ವವಿದ್ಯಾನಿಲಯವು ರಚಿಸಿಕೊಂಡಿರುವ ನಿಯಮಾವಳಿಗೆ ಬದ್ಧವಾಗಿ ಆಯ್ಕೆ ಮಾಡಲಾಗುವುದು ಮತ್ತು ಇದರಲ್ಲಿ ವಿಶ್ವವಿದ್ಯಾನಿಲಯದ ತೀರ್ಮಾನವೇ ಅಂತಿಮವಾಗಿರುತ್ತದೆ.
11. ಗುರುತಿನ ಚೀಟಿಗಳಿಗೆ ಸಂಬಂಧಿಸಿದ (Typing, Editing) ಕಾರ್ಯಗಳು ಸರಬರಾಜು ಸಂಸ್ಥೆಯವರು ನಿರ್ವಹಿಸುವುದು ಮತ್ತು Proof ಪ್ರತಿಯನ್ನು ನೀಡುವುದು.

12. ಸರಬರಾಜು ಆದೇಶದಲ್ಲಿ ನೀಡುವ ಎಲ್ಲಾ ಷರತ್ತುಗಳನ್ನು ಪಾಲಿಸಬೇಕು.
13. ದರಪಟ್ಟಿಗಳನ್ನು ಯಾವುದೇ ಕಾರಣ ನೀಡದೆ ಅಂಗೀಕರಿಸುವ ಅಥವಾ ತಿರಸ್ಕರಿಸುವ ಸಂಪೂರ್ಣ ಹಕ್ಕನ್ನು ವಿಶ್ವವಿದ್ಯಾನಿಲಯವು ಕಾಯ್ದಿರಿಸಿಕೊಂಡಿದೆ.
14. ದರಪಟ್ಟಿಯನ್ನು ಸಲ್ಲಿಸಲು ಕೊನೆಯ ದಿನಾಂಕ: 15.06.2019 ಸಂಜೆ 5.30 ಗಂಟೆಗೆ
15. ದರಪಟ್ಟಿಯನ್ನು ದಿನಾಂಕ: 17.06.2019 ರಂದು ಬೆಳಗ್ಗೆ 12.00 ಗಂಟೆಗೆ ತೆರೆಯಲಾಗುವುದು. ದರಪಟ್ಟಿಗಳನ್ನು
16. **ಕುಲಸಚಿವರು, ವಿಶ್ವವಿದ್ಯಾನಿಲಯ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ಬಿ.ಹೆಚ್. ರಸ್ತೆ, ತುಮಕೂರು–572 103** ಇವರಿಗೆ ಮುದ್ದಾಂ ಅಥವಾ ಅಂಚೆಯ ಮೂಲಕ ತಲುಪಿಸಬಹುದು. ಅಂಚೆಯ ವಿಳಂಬಕ್ಕೆ ಅಥವಾ ಅಂಚೆಯು ತಲುಪದಿದ್ದಲ್ಲಿ ವಿಶ್ವವಿದ್ಯಾನಿಲಯವು ಜವಾಬ್ದಾರಿಯಾಗುವುದಿಲ್ಲ.
17. ಹೆಚ್ಚಿನ ವಿವರಗಳು ಅಥವಾ ಮಾಹಿತಿಯು ಅಗತ್ಯವಿದ್ದಲ್ಲಿ ಕುಲಸಚಿವರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ಇವರನ್ನು ಸಂಪರ್ಕಿಸಬಹುದು.

ಕುಲಸಚಿವರು

ಕುಲಸಚಿವರು
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಪ್ರತಿಗಳು:

1. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು. (ಇಂದೇ ವೆಬ್‌ಸೈಟ್‌ನಲ್ಲಿ ಪ್ರಕಟಿಸತಕ್ಕದ್ದು)
2. ರಕ್ಷಣಾ ಪ್ರತಿ.